# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 313**
**ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ**
**(ವಿಧಾನಸಭೆಯಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ : 15.02.2024**
**ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಂಗಭದ್ರಾ ಎಡದಂಡೆ ಕಾಲುವೆಯಲ್ಲಿ ನೀರು ಕೊನೆ ಭಾಗದವರೆಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನೀರನ್ನು ಕಾಲುವೆಯ ಕೊನೆ ಭಾಗದ ರೈತರಿಗೆ ತಲುಪಿಸಲು ತೆಗೆದುಕೊಂಡ ಕ್ರಮವೇನು; | ಬಂದಿದೆ.<br><br>ಮುಖ್ಯ ಇಂಜಿನಿಯರ್, ಅಧೀಕ್ಷಕ ಇಂಜಿನಿಯರ್, ಕಾರ್ಯಪಾಲಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕಛೇರಿಯ ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡ ತಂಡಗಳನ್ನು ರಚಿಸಿ, ಹಗಲು ರಾತ್ರಿ ಪಹರೆಯೊಂದಿಗೆ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ಹರಿಸಲು ಹಾಗೂ ಕೊನೆಯ ಭಾಗದ ಅಚ್ಚುಕಟ್ಟಿಗೆ ನೀರನ್ನೊದಗಿಸಲು ಅನುವಾಗುವಂತೆ ವಿತರಣಾ ಕಾಲುವೆಗಳಲ್ಲಿ ಆನ್/ಆಫ್ ಪದ್ಧತಿಯನ್ನು ಅನುಸರಿಸಿ ನೀರು ನಿರ್ವಹಣೆಯನ್ನು ಮಾಡಲಾಗುತ್ತಿದೆ. |
| ಆ) | ಎಡದಂಡೆ ಕಾಲುವೆಯ ಅಚ್ಚು-ಕಟ್ಟು ಪ್ರದೇಶದಲ್ಲಿ ಅಕ್ರಮ ನೀರಾವರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಂತಹ ಅಕ್ರಮ ನೀರಾವರಿ ತಡೆಯಲು ತೆಗೆದುಕೊಂಡ ಕ್ರಮವೇನು? | ಬಂದಿದೆ.<br><br>ಸದರಿ ಕಾಲುವೆಯ ವ್ಯಾಪ್ತಿಗೆ ಸಂಬಂಧಿಸಿದ ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಮತ್ತು ಜೆಸ್ಕಾಂ ಇಲಾಖೆಯ ಸಹಯೋಗದೊಂದಿಗೆ ಅಗತ್ಯ ಸಹಕಾರ ಪಡೆದುಕೊಂಡು ಅನಧಿಕೃತವಾಗಿ ಬಳಸುತ್ತಿರುವ ಸಂಪರ್ಕಗಳನ್ನು ಕೂಡಲೇ ಕಡಿತಗೊಳಿಸಿ ಕಾಲುವೆಯಲ್ಲಿ ನಿಗದಿಪಡಿಸಿದ ಗೇಜನ್ನು ನಿಯಂತ್ರಿಸಿ ಕೆಳಭಾಗ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಇಂತಹ ಅಕ್ರಮಗಳಿಗೆ ಸ್ಥಳೀಯ ಅಧಿಕಾರಿಗಳು ಸಹಕಾರ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು? | ಇಂತಹ ಪ್ರಕರಣಗಳು ಯಾವುದು ಇರುವುದಿಲ್ಲ. |

**ಜಸಂಇ 18 ಎಂಎಲ್ಎ 2024**

**(ಡಿ.ಕೆ.ಶಿವಕುಮಾರ್)**
ಉಪ ಮುಖ್ಯಮಂತ್ರಿ